CCE RR/PR/NSR/NSPR(B-1)/777/3002

# B-1

**ಮಾರ್ಚ್/ಏಪ್ರಿಲ್ 2024 ರ ಪರೀಕ್ಷೆ - 1**

**MARCH/APRIL 2024 EXAMINATION-1**

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 12 ]
Total No. of Printed Pages : 12 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 45 ]
Total No. of Questions : 45 ]

**CCE RR/PR/ NSR/NSPR-B-1**
**Reduced Syllabus**

Question Paper Serial No.

**ಸಂಕೇತ ಸಂಖ್ಯೆ : 01-K**
**Code No. : 01-K**

## ವಿಷಯ : ಪ್ರಥಮ ಭಾಷೆ — ಕನ್ನಡ

## Subject : First Language — KANNADA

**(ಶಾಲಾ ಪುನರಾವರ್ತಿತ ಅಭ್ಯರ್ಥಿ / ಖಾಸಗಿ ಪುನರಾವರ್ತಿತ ಅಭ್ಯರ್ಥಿ / ಎನ್.ಎಸ್.ಆರ್. / ಎನ್.ಎಸ್.ಪಿ.ಆರ್.)**

**(Regular Repeater / Private Repeater / NSR / NSPR)**

ದಿನಾಂಕ : 25. 03. 2024 ] [ Date : 25. 03. 2024
ಸಮಯ : ಬೆಳಗ್ಗೆ 10-15 ರಿಂದ ಮಧ್ಯಾಹ್ನ 1-30 ರವರೆಗೆ ] [ Time : 10-15 A.M. to 1-30 P.M.
ಗರಿಷ್ಠ ಅಂಕಗಳು : 100 ] [ Max. Marks : 100

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

**Cut here/ಇಲ್ಲಿ ಕತ್ತರಿಸಿ**

1. ಈ ಪ್ರಶ್ನೆಪತ್ರಿಕೆಯು ಒಟ್ಟು 45 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ **ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ (ಬಾಣವನ್ನು ಅನುಸರಿಸಿ), ಎಡಬದಿ ಪಾರ್ಶ್ವವನ್ನು ಕತ್ತರಿಸಬೇಡಿ.** ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.
6. ನಿಮಗೆ ವಿತರಿಸಲಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ( Version ) ಮತ್ತು ನಿಮ್ಮ ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಆವೃತ್ತಿ ಒಂದೇ ಆಗಿರುವುದನ್ನು ಖಾತರಿಪಡಿಸಿಕೊಳ್ಳಿ.

KANNADA

**25. 03. 2024**

**TEAR HERE TO OPEN THE QUESTION PAPER**
**ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ**

**Tear here**

ಇಲ್ಲಿಂದ ಕತ್ತರಿಸಿ

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ : 6 × 1 = 6**

1. ಕನ್ನಡ ವರ್ಣಮಾಲೆಯಲ್ಲಿರುವ ಮಹಾಪ್ರಾಣಾಕ್ಷರಗಳ ಸಂಖ್ಯೆ

   (ಎ) ೦೫

   (ಬಿ) ೦೭

   (ಸಿ) ೧೩

   (ಡಿ) ೧೦

2. 'ವಾಗ್ದೇವಿ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

   (ಎ) ಆದೇಶ ಸಂಧಿ

   (ಬಿ) ಜಶ್ತ್ವ ಸಂಧಿ

   (ಸಿ) ಶ್ಚುತ್ವ ಸಂಧಿ

   (ಡಿ) ಅನುನಾಸಿಕ ಸಂಧಿ

3. ತೃತೀಯಾ ವಿಭಕ್ತಿಯ ಕಾರಕಾರ್ಥ

(ಎ) ಕರಣಾರ್ಥ

(ಬಿ) ಕರ್ಮಾರ್ಥ

(ಸಿ) ಸಂಪ್ರದಾನ

(ಡಿ) ಸಂಬಂಧ

4. ಅನೇಕ ಉಪವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನವಾಗಿದ್ದಾಗ ಉಪವಾಕ್ಯಗಳು ಮುಗಿದಾಗಲೆಲ್ಲ ಈ ಚಿಹ್ನೆಯನ್ನು ಬಳಸಲಾಗುವುದು

(ಎ) ಉದ್ಧರಣ

(ಬಿ) ವಾಕ್ಯವೇಷ್ಟನ

(ಸಿ) ಅರ್ಧವಿರಾಮ

(ಡಿ) ಪೂರ್ಣವಿರಾಮ

5. 'ಕೊರೆತ' ಪದ ಈ ವ್ಯಾಕರಣಾಂಶಕ್ಕೆ ಸೇರಿದೆ

(ಎ) ಕೃದಂತನಾಮ

(ಬಿ) ಕೃದಂತಭಾವನಾಮ

(ಸಿ) ಕೃದಂತಾವ್ಯಯ

(ಡಿ) ತದ್ಧಿತಾಂತ ಭಾವನಾಮ

6. 'ಕಣ್ದೆರೆ' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ

(ಎ) ಅಂಶಿ ಸಮಾಸ

(ಬಿ) ಕರ್ಮಧಾರಯ ಸಮಾಸ

(ಸಿ) ಕ್ರಿಯಾ ಸಮಾಸ

(ಡಿ) ಗಮಕ ಸಮಾಸ

II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ : **4 × 1 = 4**

7. ಹಲವು : ಪರಿಮಾಣವಾಚಕ :: ತೆಂಕಣ : ......................... .

8. ಕೋಕಿಲಾ : ಕೋಗಿಲೆ :: ವರ್ಣ : ......................... .

9. ಜನಕಾ : ಜನಕ್ಕೆ :: ಇಸವಾಸ : ......................... .

10. ಕೆನೆಮೊಸರು : ಜೋಡುನುಡಿ :: ಸಾಕುಸಾಕು : ......................... .

III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : **7 × 1 = 7**

11. ಏಷ್ಯಾ ಖಂಡದಲ್ಲಿಯೇ ಮೊದಲು ಪ್ರಾರಂಭಿಸಿದ ಜಲವಿದ್ಯುತ್ ಯೋಜನೆ ಯಾವುದು ?

12. ಮನೆಮಂಚಮ್ಮನ ಕತೆ ಹೇಳಿದ ಕವಿ ಯಾರು ?

13. ಶಾನುಭೋಗರು ಇರಸಾಲಿಗಾಗಿ ಎಲ್ಲಿಗೆ ಹೋಗಿದ್ದರು ?

14. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು ?

15. ಕವಿ ಜಿ.ಎಸ್. ಶಿವರುದ್ರಪ್ಪನವರು ಯಾವ ಎಚ್ಚರದೊಳು ಬದುಕಬೇಕಿದೆ ಎಂದು ಹೇಳಿದ್ದಾರೆ ?

16. ಕವಿ ಕುವೆಂಪು ಅವರಿಗೆ ಹುಲ್ಲಿನ ಹಾಸು ಹೇಗೆ ಕಂಡಿದೆ ?

17. ಕವಿ ಕುವೆಂಪು ವಿವೇಕಾನಂದರನ್ನು ಏನೆಂದು ಕರೆದಿರುವರು ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 10 × 2 = 20**

18. ನೆಹರೂ ಅವರು ವಿಶ್ವೇಶ್ವರಯ್ಯನವರನ್ನು ಕುರಿತು ಹೇಳಿದ ಮಾತುಗಳಾವುವು ?

19. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯನವರ ಅಭಿಪ್ರಾಯವೇನು ? ತಿಳಿಸಿ.

20. ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೆ ಏನು ? ವಿವರಿಸಿ.

21. ಶಾನುಭೋಗರು ಮೂರ್ಛೆಯಲ್ಲಿದ್ದಾಗ ನಡೆದ ಘಟನೆಗಳನ್ನು ವಿವರಿಸಿ.

22. ಹೊಸ ಭರವಸೆಗಳನ್ನು ಮೂಡಿಸಿ ಯಾವುದರ ನಡುವೆ ಸೇತುವೆಯಾಗಬೇಕೆಂದು ಜಿ.ಎಸ್. ಶಿವರುದ್ರಪ್ಪನವರು ಹೇಳಿದ್ದಾರೆ ?

23. ಕೃಷ್ಣನು ಕೌರವೇಂದ್ರನನ್ನು ಕೊಂದನು ಎಂದು ಕರ್ಣ ಹೇಳಲು ಕಾರಣವೇನು ?

24. ವಿವೇಕಾನಂದರು ಕೋಮುವಾದದ ಕಟ್ಟಾ ವಿರೋಧಿಯಾಗಿದ್ದರು. ಏಕೆ ?

25. 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ ?

26. ಭಗತ್‌ಸಿಂಗ್ ಹೇಗೆ ಅಮರನಾದನು ?

27. 'ಅಂಗಿ'ಯ ವಿಶೇಷತೆ ಜನಪದ ಒಗಟಿನಲ್ಲಿ ಹೇಗೆ ವ್ಯಕ್ತವಾಗಿದೆ ?

**V. ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ : 2 × 3 = 6**

28. ಸಾ.ರಾ. ಅಬೂಬಕ್ಕರ್

29. ಕುವೆಂಪು

**VI. ಕೆಳಗಿನ ಪದ್ಯ ಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ : 1 × 3 = 3**

30. ಕೋಗಿಲೆಯಾಗಿ ಪುಟ್ಟುವುದು ನಂದನದೊಳ್ ವನವಾಸಿದೇಶದೊಳ್

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ : 1 × 3 = 3**

31. "ಮನೋರಮೆಯ ಹಣೆ ಬಾಲಚಂದ್ರನಂತೆ ಆಕರ್ಷಣೀಯವಾಗಿತ್ತು."

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ : 1 × 3 = 3**

32. ಕುಂಬಾರನಿಗೆ ವರುಷ; ದೊಣ್ಣೆಗೆ ನಿಮಿಷ.

**ಅಥವಾ**

ಅತಿ ಆಸೆ ಗತಿಗೇಡು.

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 6 × 3 = 18**

33. "ಯುದ್ಧಕ್ಕೆ ಹೋದ ತನ್ನ ಮಗನ ಕಣ್ಣುಗಳಂತೆಯೇ ಇವೆಯಲ್ಲ ?"

34. "ದೇವರೆ, ಮರ ಹತ್ತುವಷ್ಟು ಅವಕಾಶ ಕರುಣಿಸು."

35. "ಕಿಡೆದುಪೊನ್ನಂ ತೆಗೆದುಕೊಳ್ವಂ"

36. "ಪ್ರೀತಿಯ ಹಣತೆಯ ಹಚ್ಚೋಣ"

37. "ಹರಿಯ ಹಗೆ ಹೊಗೆದೋರದುರುಹದೆ ಬರಿದೆ ಹೋಹುದೆ"

38. "ಎನ್ನಣುಗಾಳನೆನ್ನಣುಗದಮ್ಮನನಿಕ್ಕಿದ ಪಾರ್ಥಭೀಮರು"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** **1 × 4 = 4**

39. ನೀಲಮೇಘಮಂಡಲ– ..........................................

..................................................................

..................................................................

.......................................................... ಕಣ್ಣಾ

ಹಕ್ಕಿ ಹಾರುತಿದೆ ನೋಡಿದಿರಾ ?

**ಅಥವಾ**

ಯುಗ–ಯುಗಗಳ ..............................................

..................................................................

..................................................................

.......................................................... ಹರಸಿ

ಹಕ್ಕಿ ಹಾರುತಿದೆ ನೋಡಿದಿರಾ ?

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** **1 × 4 = 4**

40. ತೆಗೆದುತ್ತರೀಯಮಂ ಮುರಿದು ಕುದುರೆಯ ಗಳಕೆ ।

ಬಿಗಿದು ಕದಳೀದ್ರುಮಕೆ ಕಟ್ಟಲ್ಕೆ ಮುನಿಸುತರ್ ।

ಮಿಗೆ ನಡುಗಿ ಬೇಡಬೇಡರಸುಗಳ ವಾಜಿಯಂ ಬಿಡು ಬಡಿವರೆಮ್ಮನೆನಲು ॥

ನಗುತೆ ಪಾರ್ವರ ಮಕ್ಕಳಂಜಿದೊಡೆ ಜಾನಕಿಯ ।

ಮಗನಿದಕೆ ಬೆದರುವನೆ ಪೋಗಿ ನೀವೆಂದು ಲವ ।

ನಗಡುತನದಿಂದೆ ಬಿಲ್ದಿರುವನೇರಿಸಿ ತೀಡಿ ಜೇಗೈದು ನಿಂತಿರ್ದನು ॥

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 2 × 4 = 8**

41. 'ತಾಳಿದವನು ಬಾಳಿಯಾನು' ಎಂಬ ಮಾತು ಶಬರಿಯ ಪಾಲಿಗೆ ಹೇಗೆ ನಿಜವಾಗಿದೆ ? ವಿವರಿಸಿ.

**ಅಥವಾ**

ಶಬರಿಯ ಚಿಂತೆ ಹಿಂಗಿಹೋದ ಸಂದರ್ಭದ ಸ್ವಾರಸ್ಯವನ್ನು ನಿಮ್ಮ ಮಾತುಗಳಲ್ಲಿ ಬರೆಯಿರಿ.

42. ಹಲಗಲಿ ದಂಗೆಯ ಪರಿಣಾಮವೇನು ? ವಿವರಿಸಿ.

**ಅಥವಾ**

ಹಲಗಲಿ ದಂಗೆಗೆ ಕಾರಣವಾದ ಅಂಶಗಳು ಮತ್ತು ಬ್ರಿಟಿಷ್ ಸರ್ಕಾರ ನಿಯಂತ್ರಿಸಿದ ಬಗೆಯನ್ನು ಕುರಿತು ಬರೆಯಿರಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ : 1 × 4 = 4 ( 2 + 2 )**

43. ವೇಳೆಯ ಅಪವ್ಯಯ ಅಂಬೇಡ್ಕರರಿಗೆ ಅಪರಾಧವಾಗಿ ಕಾಣುತ್ತಿತ್ತು. ಒಂದು ಕ್ಷಣವನ್ನೂ ಅವರು ಅಪವ್ಯಯ ಮಾಡುತ್ತಿರಲಿಲ್ಲ. ವ್ಯಾಪಾರಿಗೆ ವೇಳೆ ಎಂದರೆ ಹಣ. ಅಂಬೇಡ್ಕರರಿಗೆ ವೇಳೆ ಎಂದರೆ ಜ್ಞಾನಾರ್ಜನೆ. ತಮ್ಮ ಬದುಕಿನ ಒಂದು ಕ್ಷಣವನ್ನೂ ವ್ಯರ್ಥವಾಗಿ ಕಳೆಯದ ನಮ್ಮ ಕಾಲದ ಇಬ್ಬರು ಮಹನೀಯರೆಂದರೆ ಒಬ್ಬರು ಗಾಂಧೀಜಿ ಮತ್ತೊಬ್ಬರು ಅಂಬೇಡ್ಕರರು. ಕಳೆದ ಕ್ಷಣ ಕಳೆದೇ ಹೋಗುತ್ತದೆಂಬ ಅರಿವು ಅವರದಾಗಿತ್ತು. ಅಮೆರಿಕದಲ್ಲಿ, ಇಂಗ್ಲೆಂಡಿನಲ್ಲಿ ಓದುತ್ತಿದ್ದಾಗ ಹೇಗೋ ಹಾಗೆ ಹಿಂತಿರುಗಿ ಸಾರ್ವಜನಿಕ

ಜೀವನದಲ್ಲಿ ತೊಡಗಿದ ಮೇಲೆಯೂ ತಮ್ಮ ಬಿಡುವನ್ನೆಲ್ಲ ಅವರು ಓದುವುದಕ್ಕೆ ಮೀಸಲಾಗಿರಿಸುತ್ತಿದ್ದರು. ರಂಜನೆಗಾಗಿ ಓದುವವರು ಅವರಲ್ಲ; ಪುಸ್ತಕ ಒದಗಿಸಬಲ್ಲ ಬೋಧನೆಯೇ ರಂಜನೆ ಎನ್ನುವುದು ಅವರ ಸೂತ್ರವಾಗಿತ್ತು. ಹೀಗಾಗಿ ಗ್ರಂಥ ಸಹವಾಸ ಅವರಿಗೆ ಅಪಾರ ಸಂತೋಷವನ್ನಲ್ಲದೆ ಬಯಸುತ್ತಿದ್ದ ಏಕಾಂತವನ್ನೂ ಒದಗಿಸುತ್ತಿತ್ತು. ಅನೇಕ ಸಲ ರಾತ್ರಿಯುದ್ದಕ್ಕೂ ಅವರು ಓದು ಬರೆಹಗಳಲ್ಲಿ ತೊಡಗಿರುತ್ತಿದ್ದುದ್ದುಂಟು. ಅವರ ನೆಚ್ಚಿನ ನಾಯಿ ಬೆಳಗಿನ ನೇವರಿಕೆಗಾಗಿ ಬಂದು ಕಾಲಬಳಿ ಸುಳಿದಾಗಲೆ ರಾತ್ರಿ ಕಳೆದುಹೋದ ಅರಿವು ಅವರಿಗಾದದ್ದುಂಟು. ರಾತ್ರಿ ಮನೆಗೆ ಹೋಗುತ್ತೇನೆಂದು ಹೇಳಿ ಹೊರಟುಹೋದ ಕಾರ್ಯದರ್ಶಿ ಬೆಳಗಿನಲ್ಲಿ ಮತ್ತೆ ಬಂದಾಗ ಮನೆಗೇಕೆ ಇನ್ನೂ ಹೋಗಲಿಲ್ಲ ಎಂದು ಕೇಳಿದ್ದುಂಟು. ಅಂಥ ಏಕಾಗ್ರತೆಯ ಓದು ಬರೆಹ ಅವರದು. ಅವರ ಜ್ಞಾನದಾಹ ಪುರಾತನ ಕಾಲದ ಚಕ್ರವರ್ತಿಯೊಬ್ಬನ ಸಾಮ್ರಾಜ್ಯದಾಹದಂತಿತ್ತು. ದಟ್ಟಡವಿಯ ಮಧ್ಯದಲ್ಲಿ ಗ್ರಂಥಾಲಯ ಒಂದನ್ನು ನಿರ್ಮಿಸಿಕೊಂಡು ತಮ್ಮ ಕೊನೆಯ ದಿನಗಳನ್ನು ಅಲ್ಲಿಯೇ ಕಳೆಯಬೇಕೆಂಬ ಅಭಿಲಾಷೆ ಅವರದಾಗಿತ್ತು.

***ಪ್ರಶ್ನೆಗಳು:***

ಅ) ಅಂಬೇಡ್ಕರರ ಜ್ಞಾನದಾಹ ಹೇಗಿತ್ತು ?

ಬ) ಅಂಬೇಡ್ಕರರು ತಮ್ಮ ಬಿಡುವಿನ ಸಮಯವನ್ನು ಹೇಗೆ ಕಳೆಯುತ್ತಿದ್ದರು ?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

44. ನಿಮ್ಮನ್ನು ಧಾರವಾಡದ ನಿವಾಸಿ 'ಹರ್ಷಿತಾ' ಎಂದು ಭಾವಿಸಿಕೊಂಡು, ನಿಮ್ಮ ಬಡಾವಣೆಯಲ್ಲಿ 'ಸಾರ್ವಜನಿಕ ಶೌಚಾಲಯ' ನಿರ್ಮಿಸಿಕೊಡುವಂತೆ ಕೋರಿ ಮಹಾನಗರ ಪಾಲಿಕೆಯ ಆಯುಕ್ತರಿಗೆ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ದಾವಣಗೆರೆಯ ಸರ್ಕಾರಿ ಪ್ರೌಢಶಾಲೆಯ 'ಅಥರ್ವ' ಎಂದು ಭಾವಿಸಿಕೊಂಡು, 'ಶಾಲೆಯಲ್ಲಿ ಆಚರಿಸಿದ ವಾರ್ಷಿಕೋತ್ಸವ' ಕಾರ್ಯಕ್ರಮವನ್ನು ವಿವರಿಸಿ, ಬೆಳಗಾವಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 'ಸಿದ್ಧಾಂತ್' ಎಂಬ ಹೆಸರಿನ ಗೆಳೆಯನಿಗೆ ಪತ್ರವನ್ನು ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯಕ್ಕೆ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ :**

**1 × 5 = 5**

45. ಏಷ್ಯನ್ ಕ್ರೀಡಾಕೂಟದಲ್ಲಿ ಭಾರತೀಯರ ಸಾಧನೆ.

**ಅಥವಾ**

ಪ್ರಾಚ್ಯ ಸ್ಮಾರಕಗಳ ಸಂರಕ್ಷಣೆ.

DO NOT WRITE ANYTHING HERE